ದಿ: ೫.೧೦.೨೦೨೩ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಂದುವರೆದ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ : ಅರ್ಜಿದಾರ ಪರವಾಗಿ ಶ್ರೀ ಎಂ.ಎಸ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನಮ್ಮ ತಾಯಿ ನಂದಗುಡಿ ಪೊ.ಠಾಣೆಗೆ ನೀಡಿರುವ ಅರ್ಜಿಯ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೪ ಎಂದು, ಸ್ವಿಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.೧೫ ಎಂದು, ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೬ ಎಂದು, ಬಟವಡೆ ಆಗದೇ ಮರಳಿ ಬಂದಿರುವ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.೧೭ ಎಂದು, ಓ.ಎಸ್.೧೯೮/೨೦೨೧ ನೇದರ ಆದೇಶ ಪುಟದ ದೃಢೀಕೃತ ಪ್ರತಿ, ವ್ಮಧ್ಯಂತರ ಅರ್ಜಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.೧೮ ಮತ್ತು ೧೯ ಎಂದು, ಆರ್.ಎಲ್. ಜಾಲಪ್ಪ ಆಸ್ಪತ್ರೆ, ಕೋಲಾರ್ ಇವರು ನೀಡಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.೨೦ ಎಂದು ಗುರ್ತಿಸಲಾಯಿತು.

ಆದ್ದರಿಂದ ನನ್ನ ಅರ್ಜಿಯನ್ನು ಪುರಸ್ಕರಿಸಬೇಕೆಂದು ವಿನಂತಿ.

( ಈ ಹಂತದಲ್ಲಿ ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**